ಕರ್ನಾಟಕ ವಿಧಾನಸಭೆ

ಹತ್ತನೆಯ ವಿಧಾನ ಸಭೆ

(ಐದನೆಯ ಅಧಿವೇಶನ)

ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕ, 1996

(1996ರ ವಿಧಾನಸಭೆಯ ವಿಧೇಯಕ ಸಂಖ್ಯೆ 2)

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ನ್ನು (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ.

ಭಾರತ ಗಣರಾಜ್ಯ ನಲವತ್ತೇಳನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ.

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ. – (1) ಈ ಅಧಿನಿಯಮವನ್ನು ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 1996 ಎಂದು ಕರೆಯತಕ್ಕದ್ದು.

(2) 4ನೇ ಪ್ರಕರಣವು ಕೂಡಲೇ ಜಾರಿಗೆ ಬರತಕ್ಕದ್ದು ಮತ್ತು ಉಳಿದ ಉಪಬಂಧಗಳು 1995ರ ನವೆಂಬರ್ ಇಪ್ಪತ್ತೊಂಬತ್ತನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

2. 152ನೇ ಪ್ರಕರಣದ ತಿದ್ದುಪಡಿ. – ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮ ಎಂದು ಉಲ್ಲೇಖಿಸಲಾಗುವುದು) 152ನೇ ಪ್ರಕರಣದಲ್ಲಿ,

(i) "ತಾಲ್ಲೂಕು ಪಂಚಾಯತಿಯ ಅಧ್ಯಕ್ಷನು" ಎಂಬ ಪದಗಳಿಗೆ "ಅಧ್ಯಕ್ಷನು ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಮುಖ್ಯಸ್ಥನಾಗಿರತಕ್ಕದ್ದು ಮತ್ತು ಅವನು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು ;

(ii) (ಸಿ) ಖಂಡವನ್ನು ಬಿಟ್ಟು ಬಿಡತಕ್ಕದ್ದು..

3. 156ನೇ ಪ್ರಕರಣದ ತಿದ್ದುಪಡಿ.– ಮೂಲ ಅಧಿನಿಯಮದ 156ನೇ ಪ್ರಕರಣದ (1)ನೇ ಉಪ-ಪ್ರಕರಣದಲ್ಲಿ,-

(i) "ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ಬೇರೆ ರೀತಿಯಲ್ಲಿ ಸ್ಪಷ್ಟವಾಗಿ ಉಪಬಂಧಿಸಿದುದನ್ನು ಉಳಿದು ಕಾರ್ಯನಿರ್ವಾಹಕ ಅಧಿಕಾರಿಯು" ಎಂಬ ಪದಗಳಿಗೆ, ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ,-

"152ನೇ ಪ್ರಕರಣದ ಅಡಿಯಲ್ಲಿನ ಅಧ್ಯಕ್ಷರ ಸಾಮಾನ್ಯ ಅಧಿಕಾರಗಳಿಗೊಳಪಟ್ಟು ಕಾರ್ಯನಿರ್ವಾಹಕ ಅಧಿಕಾರಿಯು ಈ ಮುಂದಿನ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು ಎಂದರೆ",-

(ii) (ಬ) ಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ,-

"(ಬ) ಅಧ್ಯಕ್ಷನ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಮತ್ತು ನಿಯಮಿಸಬಹುದಾದಂಥ ನಿಯಮಗಳಿಗೊಳಪಟ್ಟು ತಾಲ್ಲೂಕು ಪಂಚಾಯಿತಿಯ ಅಥವಾ ಅದರ ಅಧೀನದಲ್ಲಿನ ಹುದ್ದೆಯನ್ನು ಧಾರಣ ಮಾಡಿರುವ ಅಧಿಕಾರಿಗಳು ಮತ್ತು ನೌಕರರನ್ನು ನಿಯಂತ್ರಿಸತಕ್ಕದ್ದು".

4. 159ನೇ ಪ್ರಕರಣದ ತಿದ್ದುಪಡಿ.- ಮೂಲ ಅಧಿನಿಯಮದ 159ನೇ ಪ್ರಕರಣದ (1)ನೇ ಉಪಪ್ರಕರಣಲ್ಲಿ "ಜಿಲ್ಲೆಯ ವ್ಯಾಪ್ತಿಯೊಳಗೆ" ಎಂಬ ಪದಗಳಿಗೆ ಅವು ಬರುವ ಎರಡೂ ಕಡೆಗಳಲ್ಲಿ "ಜಿಲ್ಲಾ ಪಂಚಾಯಿತಿಯ ಅಧಿಕಾರ ವ್ಯಾಪ್ತಿಯ ಪ್ರದೇಶದೊಳಗೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

5. 193ನೇ ಪ್ರಕರಣದ ತಿದ್ದುಪಡಿ.- ಮೂಲ ಅಧಿನಿಯಮದ 193ನೇ ಪ್ರಕರಣದ (1)ನೇ ಉಪ-ಪ್ರಕರಣದಲ್ಲಿ,-

(i) "ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಸ್ಪಷ್ಟವಾಗಿ ಅನ್ಯಥಾ ಉಪಬಂಧಿಸಿದುದನ್ನುಳಿದು ಕಾರ್ಯನಿರ್ವಾಹಕ ಅಧಿಕಾರಿಯು" ಎಂಬ ಪದಗಳಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ :

" 193ನೇ ಪ್ರಕರಣದ ಅಡಿಯಲ್ಲಿನ ಅಧ್ಯಕ್ಷನ ಸಾಮಾನ್ಯ ಅಧಿಕಾರಿಗಳಿಗೆ ಒಳಪಟ್ಟು ಮುಖ್ಯಕಾರ್ಯನಿರ್ವಾಹಕ ಅಧಿಕಾರಿಯು ಈ ಮುಂದಿನ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು ಎಂದರೆ,-"

(ii) (ಬ) ಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ :

"(ಬ) ಅಧ್ಯಕ್ಷನ ಸಾಮಾನ್ಯ ಮೇಲ್ವಿಚಾರಣೆ ಹಾಗೂ ನಿಯಂತ್ರಣಕ್ಕೆ ಮತ್ತು ನಿಯಮಿಸಬಹುದಾದಂಥ ನಿಯಮದಗಳಿಗೆ ಒಳಪಟ್ಟು ಜಿಲ್ಲಾ ಪಂಚಾಯಿತಿಯ ಅಥವಾ ಅದರ ಅಧೀನದಲ್ಲಿನ ಹುದ್ದೆಯನ್ನು ಧಾರಣ ಮಾಡಿರುವ ಅಧಿಕಾರಗಳು ಮತ್ತು ನೌಕರರನ್ನು ನಿಯಂತ್ರಿಸತಕ್ಕದ್ದು"

7. ನಿರಸನ ಮತ್ತು ಉಳಿಸುವಿಕೆ.- (1) ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ಅಧ್ಯಾದೇಶ, 1996ನ್ನು (1996ರ ಕರ್ನಾಟಕ ಆಧ್ಯಾದೇಶ ಸಂಖ್ಯೆ 1) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಹಾಗೆ ನಿರಸನಗೊಳಿಸಿದ್ದರೂ ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿಯಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಕೃತ್ಯ ಅಥವಾ ಕೈಗೊಂಡ ಯಾವುದೇ ಕ್ರಮವನ್ನು ಈ ಅಧಿನಿಯಮದ ಮೂಲಕ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.